ಮೈಸೂರ ಗೆಜೆಟ್

ಸರ್ಕಾರದಿಂದ ಫಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಮಾರ್ಚೀ ತಾ॥ 26, ಸ್ರ್ 1887.

ಈ ಭಾಗವನ್ನು ಪ್ರತ್ಯೇಕ ಶೇರಿಸಿ ಇಡುವ ಬಗ್ಯೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

2ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಜೇಫ್ ಜಡ್ಜ್ಗೀರು, ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್ನಾಮೆಗಳು.

ಫಿನ್ಯಾನ್ಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡ್ಯನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ, ಷರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡ್ಯನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡ್ಯನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಫೇಸ್‌ಮೆಂಟ್ ಯಾನೇ ಷರಾ ಬಗ್ಯೆ ಇದರಡಿ ರುಜೂ ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಟಿಕೇಟೂದ ಡಿಮಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಫೇಸ್‌ಮೆಂಟ್ ಬಗ್ಯೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸರ್,
ಕಾಂಪ್ಟ್ರೋಲರ್.

ಪೊಲೀಸ್ ಇಲಾಖೆ.

ತಾರೀಖು 8ನೇ ಮಾರ್ಚೀ 1887.

ಬಾಳೇ ಹೊನ್ನೂರು ಮತ್ತು ಯಡೆಹಳ್ಳಿ ಸ್ಟೇಷನುಗಳ ಸರಹದ್ದಿನ ವಳಗೆ ಯಿರತಕ್ಕ ಕಾಡಕೊಡಗಿ ಗ್ರಾಮದಲ್ಲಿನ ಚಂದಯ್ಯನ ಮನೆಯಿಂದ 1885ನೇ ಇಸವಿ ಮೇ 13ನೇ ತಾರೀಖಿನಲ್ಲಿ ಚೋರಿಯಿಂದ ವಯ್ಯೋಣಾದ ಸುಮಾರು 12 ವರುಷ ವಯಸ್ಸುಳ್ಳ ಗುತ್ತಿ ಯಂಬ ಹುಡುಗಿಯ ಪತ್ತೇ ವಿಷಯದಲ್ಲಿ ಸಾಧಕವಾದ ವರ್ತಮಾನ ಕೊಡುವಂಥಾವರಿಗೆ 50 ರೂಪಾಯಿ ಇನಾಂ ಕೊಡಲ್ಪಡುತ್ತೆ.

ಯಲ್. ರಿಕ್ಕೆಟ್ಸ್,
ಪೊಲೀಸ್ ಇನ್‌ಸ್ಪೆಕ್ಟರ್ ಜನರಲ್.